**All India Radio: Bangalore**
**Regional Bulletin In Kannada**
**15.12.2025 / 6.40 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಶಿವರಾತ್ರೀಶ್ವರ ಶಿವಯೋಗಿಗಳ ಸಾವಿರದ ೬೬ನೇ ಜಯಂತಿ; ನಾಳೆ ಮಳವಳ್ಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ

೨. ಖಾಲಿ ಇರುವ ಸರ್ಕಾರಿ ಹುದ್ದೆ ನೇಮಕ ವಿಚಾರ; ಮುಖ್ಯಮಂತ್ರಿ ಭೇಟಿಗೆ ಅಖಿಲ ಕರ್ನಾಟಕ ವಿದ್ಯಾರ್ಥಿ ಸಂಘಕ್ಕೆ ಅನುಮತಿ ನೀಡುವಂತೆ ಹೈಕೋರ್ಟ್ ಸೂಚನೆ

೩. ದಾವಣಗೆರೆಯಲ್ಲಿ ಸರ್ಕಾರಿ ಗೌರವಗಳೊಂದಿಗೆ ಶಾಮನೂರು ಶಿವಶಂಕರಪ್ಪ ಅಂತ್ಯ ಸಂಸ್ಕಾರ- ಹಲವು ಗಣ್ಯರು ಭಾಗಿ

೪. ಶೀತಗಾಳಿಗೆ ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳು ತತ್ತರ; ಕೊಡಗಿನಲ್ಲಿಯೂ ಮೈಕೊರೆಯುವ ಚಳಿ

***************

ಶಿವರಾತ್ರೀಶ್ವರ ಶಿವಯೋಗಿಗಳ ಒಂದು ಸಾವಿರದ ೬೬ನೇ ಜಯಂತಿ ಉದ್ಘಾಟಿಸಲು ಮಂಡ್ಯ ಜಿಲ್ಲೆಯ ಮಳವಳ್ಳಿಗೆ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೨.೪೫ ಕ್ಕೆ ಆಗಮಿಸುವ ಅವರು, ೩.೧೫ ಕ್ಕೆ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಮಳವಳ್ಳಿ ಶಾಸಕ ಪಿ.ಎಂ.ನರೇಂದ್ರ ಸ್ವಾಮಿ ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಮಂಡ್ಯ ಜಿಲ್ಲೆಯಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದೆ. ಈಗಾಗಲೇ ಎಸ್‌ಪಿಜಿ ಭದ್ರತಾ ತಂಡ ಹಾಗೂ ಹೆಲಿಕಾಪ್ಟರ್‌ಗಳ ಮೂಲಕ ಭದ್ರತೆಯನ್ನು ಪರಿಶೀಲನೆ ನಡೆಸಲಾಗಿದೆ. ಜಿಲ್ಲಾಧಿಕಾರಿ ಡಾ.ಕುಮಾರ, ಐಜಿಪಿ ಡಾ.ಬೋರಲಿಂಗಯ್ಯ, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಎಲ್ಲಾ ರೀತಿಯ ಭದ್ರತೆಗಳನ್ನು ಪರಿಶೀಲನೆ ನಡೆಸಿದ್ದಾರೆ.

***************

ರಾಜ್ಯದಲ್ಲಿ ಖಾಲಿ ಇರುವ ೨ ಲಕ್ಷ ೮೪ ಸಾವಿರ ಸರ್ಕಾರಿ ಹುದ್ದೆಗಳನ್ನು ಭರ್ತಿ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಲು ವಿದ್ಯಾರ್ಥಿ ಸಂಘ ಸಲ್ಲಿಸಿದ ಮನವಿಯನ್ನು ಪರಿಗಣಿಸುವಂತೆ ಅಧಿಕಾರಿಗಳಿಗೆ ಉಚ್ಚ ನ್ಯಾಯಾಲಯ ಸೂಚಿಸಿದೆ. ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ತಕ್ಷಣ ನೇಮಕಾತಿ ಮಾಡಿಕೊಳ್ಳುವಂತೆ ಒತ್ತಾಯಿಸಿ, ಪ್ರತಿಭಟನೆಗೆ ಅನುಮತಿ ನಿರಾಕರಿಸಿದ ಪೊಲೀಸರ ನಿರ್ಧಾರವನ್ನು ಪ್ರಶ್ನಿಸಿ, ಅಖಿಲ ಕರ್ನಾಟಕ ವಿದ್ಯಾರ್ಥಿ ಸಂಘ, ಹೈಕೋರ್ಟ್‌ನ ಧಾರವಾಡ ಪೀಠಕ್ಕೆ ಮನವಿ ಸಲ್ಲಿಸಿತ್ತು. ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ನೇತೃತ್ವದ ಪೀಠವು, ಅರ್ಜಿ ವಿಲೇವಾರಿ ಮಾಡಿ ಮುಖ್ಯಮಂತ್ರಿ ಅವರೊಂದಿಗೆ ಸಭೆ ನಡೆಸಲು ಅನುಕೂಲ ಮಾಡಿಕೊಡುವಂತೆ ಸೂಚಿಸಿದೆ.

***************

ಹಾಲಿ ಶಾಸಕ, ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ ಅವರ ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ದಾವಣಗೆರೆಯಲ್ಲಿ ನೆರವೇರಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪಂಚಪೀಠದ ಸ್ವಾಮೀಜಿಗಳು ಸೇರಿದಂತೆ ಹಲವು ಗಣ್ಯರು ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಪಾರ್ಥಿವ ಶರೀರದ ಮೇಲೆ ರಾಷ್ಟ್ರಧ್ವಜ ಹೊದಿಸಿ ಮುಖ್ಯಮಂತ್ರಿಗಳ ಸಮ್ಮುಖದಲ್ಲಿಯೇ ಗಾಳಿಯಲ್ಲಿ ೩ ಸುತ್ತು ಗುಂಡು ಹಾರಿಸಿ, ಸರ್ಕಾರಿ ಗೌರವಗಳೊಂದಿಗೆ ಅಂತಿಮ ನಮನ ಸಲ್ಲಿಸಲಾಯಿತು. ಬಳಿಕ ಪಂಚಪೀಠದ ಸ್ವಾಮೀಜಿಗಳ ಸಮ್ಮುಖದಲ್ಲಿ ವೀರಶೈವ ಲಿಂಗಾಯತ ಸಂಪ್ರದಾಯದಂತೆ ವಿಧಿವಿಧಾನ ನೆರವೇರಿಸಲಾಯಿತು. ಇದಕ್ಕೂ ಮೊದಲು ನಡೆದ ಪಾರ್ಥೀವ ಶರೀರದ ಅಂತಿಮ ಯಾತ್ರೆಯಲ್ಲಿ ಸಾವಿರಾರು ಮಂದಿ ಪಾಲ್ಗೊಂಡಿದ್ದರು.

***************

ಮೈಸೂರು ಜಿಲ್ಲೆಯಲ್ಲಿ ಮುಂದುವರೆದಿರುವ ಕಂದಾಯ ಇಲಾಖೆಯ ಈ-ಪೌತಿ ಖಾತೆ ಆಂದೋಲನವು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ತಹಶೀಲ್ದಾರ್ ನೇತೃತ್ವದಲ್ಲಿ ನಡೆಯುತ್ತಿದೆ. ಬಾಕಿ ಇರುವ ಪೌತಿ ಅರ್ಜಿಗಳನ್ನು ಆಂದೋಲನದ ಮೂಲಕ ಪ್ರತಿ ಗ್ರಾಮ ಮಟ್ಟದಲ್ಲಿ ಆಯೋಜಿಸಲಾಗಿದೆ. ಅಪರ ಜಿಲ್ಲಾಧಿಕಾರಿ ಡಾ.ಪಿ. ಶಿವರಾಜು ಇಂದು ಮೈಸೂರು ತಾಲೂಕಿನ ವರುಣಾ ಹೋಬಳಿಗೆ ಸೇರಿದ ಹಾರೋಹಳ್ಳಿ ಮತ್ತು ಮೆಳ್ಳಹಳ್ಳಿ ಗ್ರಾಮಗಳಿಗೆ ಭೇಟಿ

ನೀಡಿ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿ ರೈತರೊಂದಿಗೆ ಸಂವಾದ ನಡೆಸಿದರು. ಹಾರೋಹಳ್ಳಿ ಮತ್ತು ಮೆಳ್ಳಹಳ್ಳಿಗಳಲ್ಲಿ ಸುಮಾರು ೧ ಸಾವಿರದ ೪೦೦ ದಷ್ಟು ಪೌತಿ ಖಾತೆ ಬಾಕಿ ಇದ್ದು, ನಿಯಮಾನುಸಾರ ವಿಲೇವಾರಿಗೊಳಿಸುವಂತೆ ನಿರ್ದೇಶನ ನೀಡಿದರು.

***************

ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಿ ಎಂದು ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಕಛೇರಿ ಸಭಾಂಗಣದಲ್ಲಿ ನಡೆದ ಮತ ಮಾನ್ಯಗಳಿಗೆ ನೀಡಿರುವ ಅನುದಾನಗಳ ಕಾಮಗಾರಿ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ೨೦೨೩-೨೪ರಲ್ಲಿ ೬ ಕೋಟಿ ರೂಪಾಯಿಯಲ್ಲಿ ೧೩ ಸಮುದಾಯ ಭವನ ನಿರ್ಮಾಣ ಮಾಡಲಾಗುತ್ತಿದೆ. ಮೊದಲ ಕಂತಾಗಿ ೩ ಕೋಟಿ ರೂಪಾಯಿ ಪಾವತಿಯಾಗಿದೆ. ಈ ಕಾಮಗಾರಿಗಳನ್ನು ಫೆಬ್ರವರಿ ತಿಂಗಳಲ್ಲಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ. ರೈತರಿಗೆ ಅನುಕೂಲ ಆಗುವಂತೆ ತೊಗರಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಬೇಕು ಎಂದು ತಿಳಿಸಿದ್ದಾರೆ. ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಆಗದಂತೆ ಕ್ರಮ ವಹಿಸಿ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದ್ದಾರೆ.

***************

ಅಮೆರಿಕಾ ಜತೆ ಕೇಂದ್ರ ಸರ್ಕಾರ ಮುಕ್ತ ವ್ಯಾಪಾರ, ಕೃಷಿ ಒಪ್ಪಂದಕ್ಕೆ ಮುಂದಾಗಿರುವುದನ್ನು ಖಂಡಿಸಿ ಮೈಸೂರಿನಲ್ಲಿ ರೈತರು ಪ್ರತಿಭಟನೆ ನಡೆಸಿದರು. ಮುಕ್ತ ವ್ಯಾಪಾರ ನೀತಿಗೆ ಸಹಿ ಹಾಕಬಾರದೆಂದು ಒತ್ತಾಯಿಸಿ ಮೈಸೂರಿನಲ್ಲಿ ರೈತರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನಾ ಧರಣಿ ನಡೆಸಿದರು. ಸಂಸದ ಯದುವೀರ್ ಕಚೇರಿ ಎದುರು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಸಾಮೂಹಿಕ ನಾಯಕತ್ವದಲ್ಲಿ ಪ್ರತಿಭಟನೆ ನಡೆಯಿತು. ಪ್ರತಿಭಟನೆಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವಿವಿಧ ರೈತ ಮುಖಂಡರು ಭಾಗವಹಿಸಿದ್ದರು. ಯಾವುದೇ ಕಾರಣಕ್ಕೂ ಅಮೆರಿಕಾ ದೇಶದ ಜತೆ ಇಂತಹ ಒಪ್ಪಂದಕ್ಕೆ ಕೇಂದ್ರ ಸರ್ಕಾರ ಮುಂದಾಗಬಾರದು ಎಂದು ಒತ್ತಾಯಿಸಿದರು. ಒಂದು ವೇಳೆ, ಕೇಂದ್ರ ಸರ್ಕಾರ ಒಪ್ಪಂದಕ್ಕೆ ಸಹಿ ಹಾಕಿದರೇ, ದೇಶಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ ಸಂಘಟನೆಗಳು ಎಚ್ಚರಿಕೆ ನೀಡಿವೆ.

***************

ರಾಜ್ಯದೆಲ್ಲೆಡೆ ಚಳಿಯ ವಾತಾವರಣ ಮುಂದುವರೆದಿದೆ. ರಾಜ್ಯದ ಸಮತಟ್ಟಾದ ಪ್ರದೇಶಗಳಲ್ಲಿ ಅತಿ ಕನಿಷ್ಠ ತಾಪಮಾನ ೧೦ ಡಿಗ್ರಿ ಸೆಲ್ಸಿಯಸ್ ದಾವಣಗೆರೆ, ಬೀದರ್ ಮತ್ತು ಹಾವೇರಿಯಲ್ಲಿ ದಾಖಲಾಗಿದೆ. ಉತ್ತರ ಮತ್ತು ಕಲ್ಯಾಣ ಕರ್ನಾಟಕ ಸೇರಿದಂತೆ ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ನಾಳೆಯೂ ಚಳಿ ಮುಂದುವರೆಯಲಿದೆ. ಕೆಲವೆಡೆ ತಾಪಮಾನ ಕುಸಿತ ಉಂಟಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೀದರ್, ಕಲಬುರಗಿ, ವಿಜಯಪುರ, ಬೆಳಗಾವಿ, ಮೈಸೂರು, ಚಿಕ್ಕಮಗಳೂರು, ಹಾಸನದಲ್ಲಿ ಹೆಚ್ಚಿನ ಚಳಿ ಇರಲಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರಿನಲ್ಲಿ ಬೆಳಗಿನ ಜಾವದ ವೇಳೆ ದಟ್ಟ ಮಂಜು ಕವಿದಿರುವ ಸಾಧ್ಯತೆಯಿರಲಿದೆ. ಗರಿಷ್ಠ ತಾಪಮಾನ ಕ್ರಮವಾಗಿ ೨೬ ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ತಾಪಮಾನ ೧೪ ಡಿಗ್ರಿ ಸೆಲ್ಸಿಯಸ್ ಇರಲಿದೆ. ಕರಾವಳಿ, ದಕ್ಷಿಣ ಒಳನಾಡು, ಉತ್ತರ ಒಳನಾಡಿನಲ್ಲಿ ಒಣಹವೆ ಮುಂದುವರೆಯಲಿದೆ.

***************

ಕೊಡಗಿನಲ್ಲೀಗ ಮೈ ಕೊರೆಯುವ ಚಳಿಯ ವಾತಾವರಣ ಕಂಡುಬಂದಿದೆ. ಮಡಿಕೇರಿಯಲ್ಲಿ ಹಗಲೂ ರಾತ್ರಿ ಕೊರೆಯುವ ಚಳಿ ಇದ್ದು, ಶೀತಗಾಳಿಯೂ ಜನತೆಯನ್ನು ಹೈರಾಣಾಗಿಸಿದೆ. ಅನೇಕ ವರ್ಷಗಳ ಬಳಿಕ ಮಡಿಕೇರಿಯಲ್ಲಿ ಇಷ್ಟೊಂದು ಚಳಿಯ ವಾತಾರಣವಿದೆ. ರಾಜಾಸೀಟ್, ಅಬ್ಬಿ ಜಲಪಾತ ಸೇರಿದಂತೆ ಗುಡ್ಡದ ಮೇಲಿನ ಪ್ರವಾಸಿ ತಾಣಗಳಲ್ಲಿ ಚಳಿ ಹೆಚ್ಚಾಗಿದ್ದು, ಪ್ರವಾಸಿಗರಿಗೂ ಚಳಿಯ ಬಿಸಿ ತಟ್ಟಿದೆ. ಬೆಳಗ್ಗೆ ೧೦ ಗಂಟೆಯವರೆಗೂ ಮಡಿಕೇರಿಯಲ್ಲಿ ಮಂಜು ಮುಸುಕಿದ ವಾತಾವರಣ ಸಾಮಾನ್ಯವಾಗಿದೆ. ಚಳಿ ತಡೆಯಲು ಜನರು ಸ್ವೆಟ್ಟರ್, ಜರ್ಕಿನ್ ಸೇರಿದಂತೆ ಬೆಚ್ಚಗಿನ ಉಡುಪನ್ನು ಧರಿಸುತ್ತಿದ್ದಾರೆ.

***************

ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ವನ್ಯಜೀವಿ ಕಾಯ್ದೆ ಹಾಗೂ ಅಪರಾಧಗಳ ವೈಜ್ಞಾನಿಕ ತನಿಖೆಗೆ ಸಂಬಂಧಿಸಿದಂತೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಣ್ಯ ಇಲಾಖೆಯಿಂದ ಒಂದು ದಿನದ ಕಾರ್ಯಾಗಾರ ಇಂದು ನಡೆಯಿತು.

ಕಾರ್ಯಾಗಾರದಲ್ಲಿ ಕರ್ನಾಟಕ ಅರಣ್ಯ, ಮಾಹಿತಿ ಹಕ್ಕು ಕಾಯ್ದೆ ಹಾಗೂ ಸರ್ಕಾರಿ ನೌಕರರಿಗೆ ಸಂಬಂಧಿಸಿದ ಸೇವಾ ನಿಯಮಗಳ ಬಗ್ಗೆ ಮಾಹಿತಿ ನೀಡಲಾಯಿತು.

ಕಾರ್ಯಾಗಾರದಲ್ಲಿ ಬಳ್ಳಾರಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ್ ಮಾತನಾಡಿ, ಅರಣ್ಯ ಇಲಾಖೆ ಹಾಗೂ ಪಶು ಸಂಗೋಪನೆ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿದಲ್ಲಿ ಮಾನವ-ವನ್ಯಜೀವಿಗಳ ಸಂಘರ್ಷ ತಡೆಗಟ್ಟಬಹುದಾಗಿದೆ ಎಂದು ತಿಳಿಸಿದರು.

*******ಮುಕ್ತಾಯ*******